<u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಹಾವೇರಿ ಜಿಲ್ಲೆ, ಬ್ಯಾಡಗಿ ತಾಲ್ಲೂಕಿನ ಕಾಗಿನೆಲೆ ಮತ್ತು ಇತರೆ 26 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂ: ಗ್ರಾಅಪ 24 ಗ್ರಾನೀಸ(5) 10 ದಿನಾಂಕ:19.10.2010.

2. ದಿನಾಂಕ:20.11.2012 ರ SLSSC ಸಭೆಯ ನಡವಳಿಗಳು.

3. ಮುಖ್ಯ ಇಂಜಿನಿಯರ್, PRED ಇವರ ಪತ್ರ ಸಂ:ಮುಇಂ/ಪಂರಾಇಂಇ/ತ್ವಗ್ರಾನೀಸ-1/ತಾಂಸ-1/ಸಇಂ-5/2012-13/ 9113 ದಿನಾಂಕ:12.12.2012.

<u>**ಪೀಠಿಕೆ:**</u>

ಮೇಲೆ(1)ರಲ್ಲಿ ಓದಲಾದ ದಿನಾಂಕ:19.10.2010ರ ಆದೇಶದಲ್ಲಿ ಹಾವೇರಿ ಜಿಲ್ಲೆ, ಬ್ಯಾಡಗಿ ತಾಲ್ಲೂಕಿನ ಕಾಗಿನೆಲೆ ಮತ್ತು ಇತರ 26 ಗ್ರಾಮಗಳ ರೂ.1705.00 ಲಕ್ಷ ಅಂದಾಜಿನ ಕುಡಿಯುವ ನೀರು ಸರಬರಾಜು ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿತ್ತು. ಕಚ್ಚಾ ನೀರು ಏರು ಕೊಳವೆ ಮಾರ್ಗದ ಉದ್ದದಲ್ಲಿ ಬದಲಾವಣೆ, Impounding Reservoir ನಿರ್ಮಾಣ ಇತ್ಯಾದಿ ಕಾರಣಗಳಿಂದ ರೂ.3264.24 ಲಕ್ಷಗಳಿಗೆ ಪರಿಷ್ಕೃತವಾಗಿದೆ. ದಿನಾಂಕ:20.11.2012ರಂದು ನಡೆದ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ (SLSSC) ಸಭೆಯಲ್ಲಿ ಈಗಾಗಲೇ ಆಡಳಿತಾತ್ಮಕ ಅನುಮೋದನೆ ನೀಡಿದ್ದ ದಿ:19.10.2010ರ ಆದೇಶವನ್ನು ಪುನರ್ ಪರಿಶೀಲಿಸಿ STA ಪ್ರಸ್ತಾಪದಂತೆ ವಾಸ್ತವಿಕ ಪರಿಷ್ಕೃತ ಅಂದಾಜು ಮೊತ್ತ (ರೂ.32.642 ಕೋಟಿ)ಕ್ಕೆ ತಾತ್ವಿಕ ಅನುಮೋದನೆ ನೀಡಲಾಗಿದೆ. ಮುಖ್ಯ ಇಂಜಿನಿಯರ್, PREDರವರು ಉದ್ದೇಶಿತ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಮೇಲೆ(3)ರಲ್ಲಿ ಓದಲಾದ ಪತ್ರದಲ್ಲಿ ಕೋರಿರುತ್ತಾರೆ. ಅಂತೆಯೇ 2012-13ನೇ ಸಾಲಿನಲ್ಲಿ ಈ ಯೋಜನೆ ಅನುಷ್ಠಾನ ಸಲುವಾಗಿ NRDWP (C&WQ) ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 181 ಗ್ರಾನೀಸ(5) 2012 ಬೆಂಗಳೂರು, ದಿನಾಂಕ:05.01.2013**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ದಿನಾಂಕ:20.11.2012 ರಂದು ನಡೆದ SLSSC ಸಭೆಯಲ್ಲಿ ಅನುಮೋದನೆಯಾದಂತೆ ಹಾವೇರಿ ಜಿಲ್ಲೆ, ಬ್ಯಾಡಗಿ ತಾಲ್ಲೂಕಿನ ಕಾಗಿನೆಲೆ ಮತ್ತು ಇತರೆ 26 ಗ್ರಾಮಗಳ **ರೂ.3264.24 ಲಕ್ಷ (ಮೂರು ಸಾವಿರದ ಇನ್ನೂರ ಅರವತ್ನಾಲ್ಕು ಲಕ್ಷದ ಇಪ್ಪತ್ನಾಲ್ಕು ಸಾವಿರ ರೂಪಾಯಿಗಳು ಮಾತ್ರ)** ಅಂದಾಜಿನ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಈ ಆದೇಶಕ್ಕೆ ಲಗತ್ತಿಸಿರುವ ಅಂದಾಜು ಘೋಷ್ವಾರೆಯನ್ವಯ NRDWP (C&WQ) ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ:

(ಅ) ಅನುಮೋದಿತ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆ ಪಡೆದುಕೊಂಡು, ಚಾಲ್ತಿ ಪಾರದರ್ಶಕ ನೀತಿಯನ್ವಯ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗಳಿಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/PRED ದೃಡೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. ಇವುಗಳಿಗಾಗಿ 2012-13ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಗಳನ್ನು ಅನುಷ್ಠಾನಗೊಳಿಸಬೇಕು.

(ಈ) ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ ಅನುಮೋದಿಸಿ 3rd Party Inspectionಗೆ ಒಳಪಡಿಸುವುದು.

(ಉ) ಈ ಯೋಜನೆಯ ಬಂಡವಾಳ ಹೂಡಿಕೆ (DBOT ಪದ್ಧತಿ ಹೊರತಾದ ಯೋಜನೆಗಳಿಗೆ) ಕೇಂದ್ರ ಮತ್ತು ರಾಜ್ಯ ವಲಯದ NRDWP (C&Q) ಯೋಜನೆಯಡಿ ಕ್ರಮವಾಗಿ 50:50 ಅನುಪಾತದಲ್ಲಿರುತ್ತದೆ.

(ಊ) ರೂ.25 ಕೋಟಿಗೂ ಮಿಗಿಲಾದ ಯೋಜನೆಗಳ ಅನುಷ್ಠಾನ ಸಲುವಾಗಿ DBOT ನೀತಿಯನ್ನು CE/PREDರವರು ಸಿದ್ದಪಡಿಸಿರುವ ToR ಪ್ರಕಾರ ಅನುಸರಿಸಲು ಕ್ರಮವಹಿಸತಕ್ಕದ್ದು. ಈ ನೀತಿಯನ್ವಯ ಸೂಕ್ತ ಗುತ್ತಿಗೆದಾರರು ದೊರಕದಿದ್ದಲ್ಲಿ KTPP ಕಾಯಿದೆಯನ್ವಯ ಯೋಜನೆಯ ಅನುಷ್ಠಾನಕ್ಕೆ ವಿಳಂಬ ಮಾಡದೆ ಕ್ರಮ ಜರುಗಿಸಬೇಕು.

(ಋ) ಈ ಯೋಜನೆಗೆ ತಗಲುವ ಅನುಮೋದಿತ ಅಂದಾಜು ವೆಚ್ಚದ ವ್ಯಾಪ್ತಿಯೊಳಗೆ ಗುತ್ತಿಗೆ ನೀಡಿದ 11 / 18 ತಿಂಗಳೊಳಗಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಯೋಜನೆಯನ್ನು ಕಾರ್ಯಗತಗೊಳಿಸತಕ್ಕದ್ದು. ಈಗ ಅನುಮೋದನೆಯಾದ ಕ್ರಿಯಾ ಯೋಜನೆಯ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಎಲ್ಲಾ ಆಡಳಿತಾತ್ಮಕ ಹಾಗೂ ತಾಂತ್ರಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

(ಎ) ಯೋಜನೆಗಳು ಅನುಷ್ಠಾನಗೊಂಡ ನಂತರ ಅವುಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಆಯಾ ಗುತ್ತಿಗೆದಾರರು ಕನಿಷ್ಠ 5-ವರ್ಷಗಳವರೆಗೆ ಮಾಡಬೇಕು. ನಂತರ ಸ್ಥಳೀಯ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ (VWSSC)/ ಸಂಬಂಧಿಸಿದ ಗ್ರಾಮ ಪಂಚಾಯತ್ / ಪಾರದರ್ಶಕ ನೀತಿಯನ್ವಯ ಆಯ್ಕೆ ಮಾಡಿದ ಸರ್ಕಾರೇತರ ಸಂಸ್ಥೆ / ಸಂಬಂಧಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆಮಾಡತಕ್ಕದ್ದು.

(ಏ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

(ಐ) ನೀರೆತ್ತುವ ಪ್ರಮಾಣವನ್ನು ಸೂಕ್ತ ರೀತಿಯಲ್ಲಿ ಅಳತೆ ಮಾಡುವ ಸಲುವಾಗಿ ಅಗತ್ಯ ಮಾಪಕವನ್ನು ನದಿಯ ಹತ್ತಿರ / ಜಲಾಶಯದ ಬಳಿ ಅಳವಡಿಸಿಕೊಳ್ಳತಕ್ಕದ್ದು ಹಾಗೂ ತತ್ಸಂಬಂಧದ ಬಾಬ್ತಿನ ವೆಚ್ಚವನ್ನು ಸ್ಥಳೀಯ ಪಂಚಾಯತ್‌ಗಳು ಭರಿಸಬೇಕು.

3. ಈ ಆದೇಶವನ್ನು ದಿನಾಂಕ:20.11.2012ರ SLSSC ಸಭೆಯ ನಡವಳಿಗಳನ್ವಯ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ IFA ರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ 13 ಆಂಅಸ 2012 ದಿ:02.04.2012ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.

4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ ಬೆಂ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂ.
9. ವಿಶೇಷಾಧಿಕಾರಿಗಳು (ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು,ಆರ್ಥಿಕ ಇಲಾಖೆ, ವಿಧಾನಸೌಧ ಬೆಂ.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಸಂಕೀರ್ಣ,ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.-20.
12. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಹಾವೇರಿ.
13. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾವೇರಿ.
14. ಅಧೀಕ್ಷಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಛೇರಿ, ಧಾರವಾಡ
15. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾವೇರಿ.
16. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು-20.
17. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
18. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
19. ನಿರ್ದೇಶಕರು KRWSSA ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು/ ಅಪರ ನಿರ್ದೇಶಕರು, (ಆರ್ಥಿಕ) KRWSSA/SWSM/ ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ, ಇವರುಗಳ ಆಪ್ತ ಸಹಾಯಕರು.
20. ಮ್ಯಾನೇಜರ್ ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂರಸ್ತೆ, ಬೆಂಗಳೂರು.
21. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
22. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
23. ರಾಜ್ಯ ಪತ್ರಾಗಾರ ಇಲಾಖೆ(ಬಿಡಿ ಪ್ರತಿ ಶಾಖೆ)
24. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ-10ಪ್ರತಿಗಳು.
25. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 181 ಗ್ರಾನೀಸ(5) 12, ದಿನಾಂಕ: 05-01-2012
ಲಗತ್ತು

## ABSTRACT ESTIMATE

**NAME OF WORK: WATER SUPPLY SCHEME TO KAGINELE & OTHER 26 VILLAGES**

DISTRICT : HAVERI

TALUK: BYADAGI

| Sl. No. | Description | Amount as per DPR (Rs. In lakhs) |
|---|---|---|
| 1 | Head Works | 70.90 |
| 2 | Impounding Reservoir | 709.70 |
| 3 | Raw Water Rising Main & Pumping Machinery | 902.57 |
| 4 | Water Treatment Plant | 175.81 |
| 5 | Pure Water Rising and Pumping Machinery | 1050.60 |
| 6 | Express Feeder line | 70.00 |
| 7 | Land Acquisition | 10.00 |
| 8 | DPR preparation charges & Miscellaneous | 77.17 |
| | **Sub-Total** | **3066.75** |
| 9 | O & M for 5 Years (excluding Energy Charges) | 197.49 |
| | **TOTAL** | **3264.24** |

Chief Engineer,
Panchayat Raj Engineering Department
Bangalore

"ಅನುಮೋದಿಸಿದೆ"

ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ